# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೆಯ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**<u>ಕಾರ್ಯಕಲಾಪಗಳ ಪಟ್ಟಿ</u>**

**ಶುಕ್ರವಾರ, ದಿನಾಂಕ: 17ನೇ ಮಾರ್ಚ್, 2017**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಅ) ಶ್ರೀ ಸಿದ್ಧರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-**

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2016ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ರಾಜಸ್ವ ವಲಯದ ಮೇಲಿನ ವರದಿಯನ್ನು (ಸಂಖ್ಯೆ-5) ಸಭೆಯ ಮುಂದಿಡುವುದು.

**ಆ)** ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೆಯ ಮತ್ತು ನಾಲ್ಕನೆಯ ಪಟ್ಟಿಗಳ ರೀತ್ಯಾ:-

## 03. ಶಾಸನ ರಚನೆ

**<u>ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>**

**ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ, 2017**

**ಶ್ರೀ ತನ್ವೀರ್ ಸೇಠ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕಕ್ಕೆ ವಿಧಾನ ಪರಿಷತ್ತಿನ ಪರಿಶೀಲನಾ ಸಮಿತಿಯು ವರದಿ ಮಾಡಿರುವ ತಿದ್ದುಪಡಿಗಳ ರೀತ್ಯಾ ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

**ಶ್ರೀ ಪುಟ್ಟಣ್ಣ** ಅವರು ರಾಜ್ಯದಲ್ಲಿ ಖಾಸಗಿ ಕೇಬಲ್ ನೆಟ್‌ವರ್ಕ್ ಏಜೆನ್ಸಿಗಳು ಸಾರ್ವಜನಿಕರಿಂದ ಹೆಚ್ಚಿನ ಹಣವನ್ನು ಸುಲಿಗೆ ಮಾಡುತ್ತಿರುವ ಬಗ್ಗೆ ಕಟ್ಟುನಿಟ್ಟಿನ ಕಾನೂನು ರೂಪಿಸುವ ಹಾಗೂ ಸರ್ಕಾರದಿಂದಲೇ ಕೇಬಲ್ ನೆಟ್‌ವರ್ಕ್ ವ್ಯವಸ್ಥೆಯನ್ನು ಜಾರಿಗೆ ತಂದು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

**ಶ್ರೀ ರಾಮಚಂದ್ರ ಗೌಡ** ಅವರು ಬಿ.ಬಿ.ಎಂ.ಪಿ., ವ್ಯಾಪ್ತಿಯಲ್ಲಿರುವ ಜೀವಂತ ಕೆರೆಗಳು, ರಸಾಯನಿಕ ಹಾಗೂ ಕೈಗಾರಿಕಾ ತ್ಯಾಜ್ಯ ವಸ್ತುಗಳಿಂದ ಮಲಿನಗೊಂಡು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. (**ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು**)

## 06. ವಿತ್ತೀಯ ಕಾರ್ಯಕಲಾಪ

2017-2018ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ.

(ಎರಡನೇ ದಿನ)

## 07. ಖಾಸಗಿ ಸದಸ್ಯರ ಕಾರ್ಯಕಲಾಪಗಳು

**ಖಾಸಗಿ ಸದಸ್ಯರ ವಿಧೇಯಕದ ಮಂಡನೆ**

**"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ", 2016:-**

**ಶ್ರೀ ಬಸವರಾಜ ಹೊರಟ್ಟಿ** (ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು) ಅವರು:-

ಅ) 2016ನೇ ಸಾಲಿನ **"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ"**ವನ್ನು ಮಂಡಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**